**ಎಂ.ವಿ.ಸಿ.597/2023, ಪಿ.ಡಬ್ಲ್ಯೂ-1 ಹೆಸರುಃ ಅನುಷ ಕೆ ಆರ್**

**ದಿಃ24-12-2025 ರಂದು ಸಾಕ್ಷಿದಾರರು ಹಾಜರಿದ್ದು, ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಶ್ರೀ ಕೆ.ಇ.ಸಿ ವಕೀಲರಿಂದಃ**

ನಾನು ನನ್ನ ಪ್ರಮಾಣ ಪತ್ರಿಕೆಯನ್ನು ಸಲ್ಲಿಸಿರುತ್ತೇನೆ. ಇದರಲ್ಲಿರುವ ಎಲ್ಲಾ ಸಂಗತಿಗಳು ಸತ್ಯವಾಗಿರುತ್ತದೆ. ಪ್ರಮಾಣ ಪತ್ರದಲ್ಲಿ ಇರುವ ಸಹಿಗಳು ನನ್ನದೇ ಆಗಿರುತ್ತದೆ.

ಚಿಕ್ಕಜಾಜೂರು ಪೊಲೀಸ್ ಠಾಣೆಯ ಠಾಣಾ ಮೊಕದ್ದಮೆ ಸಂಖ್ಯೆ 214/2022 ರ ದೂರು, ಪ್ರ.ವ. ವರದಿ, ಮಹಜರ್, ವಾಹನ ಅಮಾನತ್ತು ಪಂಚನಾಮೆ, ಶವ ತನಿಖಾ ವರದಿ, ಶವ ಪರೀಕ್ಷಾ ವರದಿ, ವಾಹನ ತಪಾಸಣಾ ವರದಿ ಮತ್ತು ದೋಷಾರೋಪಣ ಪಟ್ಟಿಯ ದೃಡೀಕೃತ ನಕಲುಗಳನ್ನು ಹಾಜರುಪಡಿಸಿದ್ದು, ನಿಪಿ-1 ರಿಂದ 8 ಎಂದು ಗುರುತಿಸಲಾಯಿತು. ನನ್ನ ಮೃತ ಪತಿಗೆ ಸಂಬಂಧಿಸಿದ ಶಾಲಾ ದಾಖಲಾತಿಯನ್ನು ಹಾಜರುಪಡಿಸಿದ್ದು, ನಿಪಿ-9 ಎಂದು ಗುರುತಿಸಲಾಯಿತು. ಅರ್ಜಿದಾರರಿಗೆ ಸಂಬಂಧಿಸಿದ ಆಧಾರ್ ಕಾರ್ಡುಗಳನು ಹಾಜರುಪಡಿಸಿದ್ದು, ನಿಪಿ-10 ರಿಂದ 12 ಎಂದು ಗುರುತಿಸಲಾಯಿತು. 3 ನೇ ಅರ್ಜಿದಾರರ ಹೆಸರಿನಲ್ಲಿ ನಾಗೇನಹಳ್ಳಿ ಗ್ರಾಮದ ಸರ್ವೇ ನಂ.79/1 ರಲ್ಲಿ ಜಮೀನು ಇರುವ ಬಗ್ಗೆ ಪಹಣಿಯನ್ನು ಹಾಜರುಪಡಿಸಿದ್ದು, ನಿಪಿ-13 ಎಂದು ಗುರುತಿಸಲಾಯಿತು.

**ಪಾಟೀ ಸವಾಲಿಗಾಗಿ ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ತಕ್ಕಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಹೊಳಲ್ಕೆರೆ